# ಮಂಗಳೂರು ವಿಶ್ವವಿದ್ಯಾನಿಲಯ

**ದಿನಾಂಕ 29.05.2025ರಂದು 12.00 ಗಂಟೆಗೆ ಮಂಗಳೂರು ವಿಶ್ವವಿದ್ಯಾನಿಲಯದ ಆಡಳಿತ ಸೌಧದ ರಾಣಿ ಅಬ್ಬಕ್ಕ ಸಭಾಂಗಣದಲ್ಲಿ ನಡೆದ ಶೈಕ್ಷಣಿಕ ಮಂಡಳಿಯ 2025-26ನೇ ಸಾಲಿನ ಪ್ರಥಮ ವಿಶೇಷ ಸಭೆಯ ನಡವಳಿಗಳು.**

**ಉಪಸ್ಥಿತರು:**

**ಅನುಪಸ್ಥಿತರು:**

## ಪ್ರಾರಂಭಿಕ

ಪ್ರಾರಂಭದಲ್ಲಿ ಕುಲಸಚಿವರು ಸಭಾಧ್ಯಕ್ಷರಾದ ಮಾನ್ಯ ಕುಲಪತಿಯವರನ್ನು, ವಿಧಾನ ಪರಿಷತ್ ಶಾಸಕರಾದ ಮಧು ಜಿ. ಮಾದೇಗೌಡರನ್ನು, ಎಲ್ಲಾ ಸದಸ್ಯರುಗಳನ್ನು, ಮಾಧ್ಯಮ ಪ್ರತಿನಿಧಿಗಳನ್ನು ಮತ್ತು ಸಭೆಯಲ್ಲಿ ಹಾಜರಿರುವ ಎಲ್ಲಾ ಅಧಿಕಾರಿಗಳನ್ನು ಹಾಗೂ ಆಡಳಿತ ಸಿಬ್ಬಂದಿಯವರನ್ನು ಸಭೆಗೆ ಸ್ವಾಗತಿಸಿ, ಸಭಾಧ್ಯಕ್ಷರಲ್ಲಿ ಸಭೆಯನ್ನು ಮುಂದುವರಿಸುವಂತೆ ಕೋರಿದರು. ಮಾನ್ಯ ಕುಲಪತಿಯವರು ಮತ್ತೊಮ್ಮೆ ಎಲ್ಲರನ್ನೂ ಸಭೆಗೆ ಸ್ವಾಗತಿಸಿ, ಸಭೆಯನ್ನು ಪ್ರಾರಂಭಿಸಿದರು.

- **ಸ್ವಾಗತ:**

ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯದ ಅಧಿನಿಯಮ 2000ದ ಪ್ರಕರಣ 30(1)(viii) ರಂತೆ ಮಂಗಳೂರು ವಿಶ್ವವಿದ್ಯಾನಿಲಯದ ಶೈಕ್ಷಣಿಕ ಮಂಡಳಿ ಸದಸ್ಯರಾಗಿ ನಾಮನಿರ್ದೇಶನಗೊಂಡಿರುವ **ಪ್ರೊ.ಬೋಜ ಪೂಜಾರಿ,** ಹಿರಿಯ ಪ್ರಾಧ್ಯಾಪಕರು, ಸ್ನಾತಕೋತ್ತರ ರಸಾಯನಶಾಸ್ತ್ರ ಅಧ್ಯಯನ ವಿಭಾಗ, ಮಂಗಳೂರು ವಿಶ್ವವಿದ್ಯಾನಿಲಯ ಇವರನ್ನು ಶೈಕ್ಷಣಿಕ ಮಂಡಳಿ ಸಭೆಗೆ ಸ್ವಾಗತಿಸಲಾಯಿತು.

## ➢ ಕೃತಜ್ಞತೆಗಳು:

1. ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯದ ಅಧಿನಿಯಮ 2000ದ ಪ್ರಕರಣ 30(1)(vi) ರಂತೆ ಮಂಗಳೂರು ವಿಶ್ವವಿದ್ಯಾನಿಲಯದ ಶೈಕ್ಷಣಿಕ ಮಂಡಳಿಗೆ ಸಂಯೋಜಿತ ಕಾಲೇಜುಗಳ ಪ್ರಾಂಶುಪಾಲರ ಜೇಷ್ಠತೆ ಹಾಗೂ ಸರದಿಯ ಮೇರೆಗೆ ಸದಸ್ಯರಾಗಿ ನಾಮನಿರ್ದೇಶನಗೊಂಡಿದ್ದ **ಶ್ರೀ ಬಿ.ಕೆ.ಅಬ್ದುಲ್ ಲತೀಫ್,** ಪ್ರಾಂಶುಪಾಲರು, ಮೆಲ್ಕಾರ್ ಡಿಗ್ರಿ ಕಾಲೇಜು, ಮಾರ್ನಬೈಲ್, ಸಜಿಪ ಮುನ್ನೂರು, ಬಂಟ್ವಾಳ ತಾಲೂಕು ಹಾಗೂ **ಡಾ.ಪರಮೇಶ್ ಹೆಚ್.ಎಂ.,** ಪ್ರಾಂಶುಪಾಲರು, ಪ್ರಸನ್ನ ಕಾಲೇಜ್ ಆಫ್ ಎಜ್ಯುಕೇಶನ್, ಲಾಯಿಲ, ಬೆಳ್ತಂಗಡಿ ತಾಲೂಕು ಇವರುಗಳ ಸದಸ್ಯತ್ವದ ಅವಧಿಯು ಕೊನೆಗೊಂಡಿರುವುದರಿಂದ ಶೈಕ್ಷಣಿಕ ಮಂಡಳಿ ಸದಸ್ಯತ್ವದಿಂದ ಮುಕ್ತಗೊಳಿಸಲಾಗಿದೆ.

2. ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯದ ಅಧಿನಿಯಮ 2000ದ ಪ್ರಕರಣ 30(1)(viii) ರಂತೆ ಮಂಗಳೂರು ವಿಶ್ವವಿದ್ಯಾನಿಲಯದ ಶೈಕ್ಷಣಿಕ ಮಂಡಳಿಗೆ ಪ್ರಾಧ್ಯಾಪಕರ ಜೇಷ್ಠತೆ ಹಾಗೂ ಸರದಿಯ ನೆಲೆಯಲ್ಲಿ ನಾಮನಿರ್ದೇಶನಗೊಂಡಿದ್ದ **ಪ್ರೊ.ವೈ.ನಾರಾಯಣ,** ಹಿರಿಯ ಪ್ರಾಧ್ಯಾಪಕರು, ಸ್ನಾತಕೋತ್ತರ ಭೌತಶಾಸ್ತ್ರ ಅಧ್ಯಯನ ವಿಭಾಗ, ಮಂಗಳೂರು ವಿಶ್ವವಿದ್ಯಾನಿಲಯ ಇವರ ಸದಸ್ಯತ್ವದ ಅವಧಿಯು ಕೊನೆಗೊಂಡಿರುವುದರಿಂದ ಶೈಕ್ಷಣಿಕ ಮಂಡಳಿ ಸದಸ್ಯತ್ವದಿಂದ ಮುಕ್ತಗೊಳಿಸಲಾಗಿದೆ.

ಇವರೆಲ್ಲರೂ ಮಂಗಳೂರು ವಿಶ್ವವಿದ್ಯಾನಿಲಯದ ಸರ್ವತೋಮುಖ ಪ್ರಗತಿಗೆ ಹಾಗೂ ಉನ್ನತ ಶಿಕ್ಷಣದ ಸರ್ವಾಂಗೀಣ ಅಭಿವೃದ್ಧಿಗೆ ಪೂರಕ ಸಲಹೆ ಮತ್ತು ಸಹಕಾರಗಳನ್ನು ನೀಡಿರುತ್ತಾರೆ. ಇವರಿಗೆ ವಿಶ್ವವಿದ್ಯಾನಿಲಯದ ಶೈಕ್ಷಣಿಕ ಮಂಡಳಿಯ ಪರವಾಗಿ ಕೃತಜ್ಞತಾಪೂರ್ವಕ ಅಭಿನಂದನೆಗಳನ್ನು ಸಲ್ಲಿಸಲಾಯಿತು.

# ಪ್ರಾಸ್ತಾವಿಕ

**ಈ ಕೆಳಕಂಡ ವಿಷಯಗಳನ್ನು ಮಾನ್ಯ ಕುಲಪತಿಯವರು ಸಭೆಯ ಗಮನಕ್ಕೆ ತಂದರು**

1. ಮಂಗಳೂರು ವಿಶ್ವವಿದ್ಯಾನಿಲಯದ ಸ್ನಾತಕ ಪದವಿಯ ಆರನೇ ಸೆಮಿಸ್ಟರ್‌ನ ವಾರ್ಷಿಕ ಪರೀಕ್ಷೆಗಳು ಜೂನ್ 9 ರಿಂದ ಪ್ರಾರಂಭಗೊಂಡು ಜುಲೈ 15 ರ ವರೆಗೆ ನಡೆಯಲಿವೆ ಎಂದು ಸಭೆಗೆ ತಿಳಿಸಿದರು.

2. ರಾಜ್ಯದ ಎಲ್ಲಾ ವಿಶ್ವವಿದ್ಯಾನಿಲಯಗಳಲ್ಲಿ ಏಕರೂಪದ ವೇಳಾಪಟ್ಟಿ ಪ್ರಕಟಿಸಲು ಸರಕಾರ ತೀರ್ಮಾನಿಸಿದ ಬಗ್ಗೆ ನಮಗೆ ಅಧಿಕೃತ ಮಾಹಿತಿ ಯಾ ಸೂಚನೆ ಬಂದಿಲ್ಲ. ಮಂಗಳೂರು ವಿಶ್ವವಿದ್ಯಾನಿಲಯ ಹೊರತುಪಡಿಸಿ ರಾಜ್ಯದ ಇತರ ವಿಶ್ವವಿದ್ಯಾನಿಲಯಗಳಲ್ಲಿ ಈಗ ಅಂತಿಮ ಸೆಮಿಸ್ಟರ್ ತರಗತಿಗಳು ನಡೆಯುತ್ತಿದ್ದು, ಹೀಗಾಗಿ ಏಕರೂಪದ ವೇಳಾಪಟ್ಟಿ ಜಾರಿ ಸಹ ವಿಶ್ವವಿದ್ಯಾನಿಲಯಕ್ಕೆ ಒಂದು ರೀತಿಯ ಸವಾಲಾಗಿದೆ ಹಾಗೂ ವಿಶ್ವವಿದ್ಯಾನಿಲಯದ ಪದವಿ ತರಗತಿಗಳನ್ನು ಜುಲೈ 28 ರಿಂದ ಆರಂಭಿಸಲು ನಿರ್ಧರಿಸಿದ್ದೇವೆ ಎಂದು ಸಭೆಗೆ ತಿಳಿಸಿದರು.

**I. ದಿನಾಂಕ 25.03.2025 ರಂದು ಆನ್‌ಲೈನ್ ಮೂಲಕ ನಡೆದ ಶೈಕ್ಷಣಿಕ ಮಂಡಳಿಯ 2024-25ನೇ ಸಾಲಿನ ಚತುರ್ಥ ಸಾಮಾನ್ಯ ಸಭೆಯ ನಡವಳಿಯ ದೃಢೀಕರಣ.**

-ದೃಢೀಕರಿಸಲಾಯಿತು.-

**II. ಘಟಿಕೋತ್ಸವದ ಪೂರ್ವಭಾವಿಯಾಗಿ ದಿನಾಂಕ 28.03.2025 ರಂದು ನಡೆದ ಶೈಕ್ಷಣಿಕ ಮಂಡಳಿಯ 2024-25ನೇ ಸಾಲಿನ ತೃತೀಯ ಸಾಮಾನ್ಯ ಸಭೆಯ ನಡವಳಿಯ ದೃಢೀಕರಣ.**

-ದೃಢೀಕರಿಸಲಾಯಿತು.-

**III. ಘನತೆವೆತ್ತ ಕುಲಾಧಿಪತಿಗಳಿಂದ ಅನುಮೋದನೆಗೊಂಡ ವಿನಿಯಮಗಳು /ಪರಿನಿಯಮಗಳು**

-ಯಾವುದೂ ಇರುವುದಿಲ್ಲ.-

**IV. ಕುಲಪತಿಗಳು, ಸಿಂಡಿಕೇಟು, ನಿಕಾಯಗಳು ಮತ್ತು ಅಧ್ಯಯನ ಮಂಡಳಿಗಳಿಂದ ಬಂದ ಪ್ರಸ್ತಾವನೆಗಳು:**

**ಕಾರ್ಯಸೂಚಿ ಸಂಖ್ಯೆ:** **ಹಣಕಾಸು:ಶೈ.ಮ.ವಿ.ಸ.1:1 (2025-26)**

**ವಿಷಯ:** ಮಂಗಳೂರು ವಿಶ್ವವಿದ್ಯಾನಿಲಯದ 2025-26ನೇ ಸಾಲಿನ ಆಯವ್ಯಯ ಅಂದಾಜುಗಳು ಮತ್ತು 2024-25ನೇ ಸಾಲಿನ ಪರಿಷ್ಕೃತ ಆಯವ್ಯಯ ಅಂದಾಜುಗಳ ಅನುಮೋದನೆ ಬಗ್ಗೆ.

**ನಿರ್ಣಯ:** **ಅನುಮೋದಿಸಲಾಯಿತು.**

ವಿಧಾನ ಪರಿಷತ್ ಶಾಸಕರಾದ ಮಧು ಜಿ. ಮಾದೇಗೌಡ, ಈ ಕೆಳಗಿನ ಸಲಹೆಗಳನ್ನು ಸಭೆಗೆ ನೀಡಿದರು.

- ವಿಶ್ವವಿದ್ಯಾನಿಲಯದ 2025-26ನೇ ಸಾಲಿನ ಆಯವ್ಯಯದಲ್ಲಿ ₹.37.00 ಕೋಟಿ ಕೊರತೆಯಾಗಿದ್ದು, ಈ ಬಗ್ಗೆ ವಿಶ್ವವಿದ್ಯಾನಿಲಯವು ಆಂತರಿಕ ಸಂಪನ್ಮೂಲವನ್ನು ಹೆಚ್ಚಿಸುವಲ್ಲಿ ಗಮನಹರಿಸಬೇಕು ಎಂದರು.

- ವಿಶ್ವವಿದ್ಯಾನಿಲಯಕ್ಕೆ ಈ ಹಿಂದೆ ಯುಜಿಸಿಯಿಂದ ಮತ್ತು ಸರಕಾರದಿಂದ ವಿವಿಧ ಅನುದಾನಗಳು ಬರುತ್ತಿದ್ದು, ಈಗ ಈ ಅನುದಾನಗಳು ಬರುತ್ತಿಲ್ಲ. ಈ ಕಾರಣದಿಂದ ವಿಶ್ವವಿದ್ಯಾನಿಲಯದ ಎಲ್ಲಾ ವಿಭಾಗಗಳು ಸ್ವ-ಸಂಪನ್ಮೂಲ ಸಂಗ್ರಹಿಸುವ ಶಕ್ತಿ ಪಡೆದು ಆರ್ಥಿಕವಾಗಿ ಸದೃಢವಾಗಬೇಕಿದೆ. ಈ ನಿಟ್ಟಿನಲ್ಲಿ ಪ್ರತಿ ವಿಭಾಗದ ಮುಖ್ಯಸ್ಥರು ಹೊಸ ಯೋಜನೆಗಳ ಬಗ್ಗೆ ಗಮನಹರಿಸಿ, ವಿಭಾಗದ ನೆಲೆಯಲ್ಲಿ ಸಂಪನ್ಮೂಲ ಕ್ರೋಢೀಕರಣಕ್ಕೆ ಪ್ರಯತ್ನಿಸಿದರೆ ಭವಿಷ್ಯದ ದೃಷ್ಠಿಯಿಂದ ಉತ್ತಮ ಹಾಗೂ ವಿಭಾಗಗಳು ಆರ್ಥಿಕವಾಗಿ ಸದೃಢವಾಗಬಹುದು ಎಂದರು.

- ವಿಶ್ವವಿದ್ಯಾನಿಲಯದಲ್ಲಿ ವಿದ್ಯಾರ್ಥಿಗಳ ಪ್ರವೇಶಾತಿಗಳು ತುಂಬಾ ಕಡಿಮೆಯಾಗುತ್ತಿದ್ದು, ವಿಶ್ವವಿದ್ಯಾನಿಲಯವು ಕೈಗಾರಿಕಾ ಘಟಕಗಳೊಂದಿಗೆ ಕೈಜೋಡಿಸಿ, ಅವರ ಜೊತೆ MOU ಮಾಡಿಕೊಂಡು, ವಿದ್ಯಾರ್ಥಿಗಳು ಪದವಿ ಪಡದ ನಂತರ ಉದ್ಯೋಗ ನೀಡುವ ಖಾತರಿ ನೀಡದರೆ ವಿದ್ಯಾರ್ಥಿಗಳ ಪ್ರವೇಶಾತಿ ಸಂಖ್ಯೆ ಜಾಸ್ತಿಯಾಗಬಹುದು ಎಂದರು.

ಈ ಬಗ್ಗೆ ಮಾನ್ಯ ಕುಲಪತಿಯವರು ವಿಶ್ವವಿದ್ಯಾನಿಲಯವು ಈಗ ದುಂದುವೆಚ್ಚಗಳನ್ನು ತುಂಬಾ ಕಡಿಮೆ ಮಾಡುತ್ತಿರುವುದಾಗಿ ತಿಳಿಸಿದರು. ಹಾಗೂ ವಿಶ್ವವಿದ್ಯಾನಿಲಯಕ್ಕೆ ಕಳೆದ ವರ್ಷ 4 ಪೇಟೆಂಟ್‌ಗಳು ಬಂದಿದ್ದು, ಬೇರೆ ಬೇರೆ ಸಂಸ್ಥೆಗಳ ಜೊತೆ ವಿಶ್ವವಿದ್ಯಾನಿಲಯದ 18 ವಿಭಾಗಗಳು ಒಪ್ಪಂದ ಮಾಡಿಕೊಂಡಿದ್ದು, ಸಂಶೋಧನೆಗೆ ಉತ್ತೇಜನ ನೀಡಲು ಈ ವರ್ಷದಿಂದ ಆಯ್ದ ಐವರು ಸಂಶೋಧನಾ ವಿದ್ಯಾರ್ಥಿಗಳಿಗೆ ತಲಾ ₹.1.00 ಲಕ್ಷದಂತೆ ಮೂಲಧನವಾಗಿ ಆಯ್ದ ಕಿರು ಸಂಶೋಧನಾ ಪ್ರಾಜೆಕ್ಟ್‌ಗಳಿಗೆ ನೀಡಲು ತೀರ್ಮಾನಿಸಲಾಗಿದೆ ಎಂದರು

ಮುಂದುವರಿದು, ವಿಶ್ವವಿದ್ಯಾನಿಲಯದಲ್ಲಿ ವಿದ್ಯಾರ್ಥಿಗಳಿಗೆ ಉದ್ಯೋಗ ನೀಡುವ ಖಾತರಿ ಕಾರ್ಯಕ್ರಮಗಳನ್ನು ರೂಪಿಸಲಾಗುವುದು ಹಾಗೂ ವಿಶ್ವವಿದ್ಯಾನಿಲಯದಲ್ಲಿ ಕಳೆದ 15 ವರ್ಷಗಳಿಂದ ಅತಿಥಿ ಉಪನ್ಯಾಸಕರಾಗಿ ಕಾರ್ಯನಿರ್ವಹಿಸುತ್ತಿರುವ ಹಿರಿಯರನ್ನು ವಿಶ್ವವಿದ್ಯಾನಿಲಯದ ಆಡಳಿತ ವಿಭಾಗದಲ್ಲಿ ಕಾರ್ಯನಿರ್ವಹಿಸಲು ಕ್ರಮಕೈಗೊಳ್ಳಲಾಗುತ್ತಿದೆ ಎಂದು ತಿಳಿಸಿದರು.

**ಕಾರ್ಯಸೂಚಿ ಸಂಖ್ಯೆ:** **ಸಾರ್ವತ್ರಿಕ:ಶೈ.ಮ.ವಿ.ಸ.1:2 (2025-26)**

**ವಿಷಯ:** ಮಂಗಳೂರು ವಿಶ್ವವಿದ್ಯಾನಿಲಯದ 2023-24ನೇ ಸಾಲಿನ ವಾರ್ಷಿಕ ವರದಿಯ ಅನುಮೋದನೆ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು

**ಕಾರ್ಯಸೂಚಿ ಸಂಖ್ಯೆ:** **ಎಸಿಸಿ:ಶೈ.ಮ.ವಿ.ಸ.1:3 (2025-26)**

**ವಿಷಯ:** ರಾಜ್ಯ ಶಿಕ್ಷಣ ನೀತಿ ಆಯೋಗದ ಮಾರ್ಗಸೂಚಿ ಪ್ರಕಾರ ತಯಾರಿಸಿರುವ ದ್ವಿತೀಯ ಸೆಮಿಸ್ಟರ್ ಬಿ.ಕಾಂ. (ವೊಕೇಶನಲ್) ಕಂಪ್ಯೂಟರ್ ಅಪ್ಲಿಕೇಶನ್ ಪದವಿ ಕಾರ್ಯಕ್ರಮದ Quantitative Techniques II Optional ಕೋರ್ಸ್‌ನ ಪಠ್ಯಕ್ರಮ ಮತ್ತು ಶಿರೋನಾಮೆಯ ಬದಲಾವಣೆಗೆ ಘಟನೋತ್ತರ ಅನುಮೋದನೆ ನೀಡುವ ಬಗ್ಗೆ.

**ನಿರ್ಣಯ:** ಘಟನೋತ್ತರವಾಗಿ ಅನುಮೋದಿಸಲಾಯಿತು.

ಕುಲಸಚಿವರು ಶೈಕ್ಷಣಿಕ ಮಂಡಳಿ ಸದಸ್ಯರ ಸಲಹೆ ಸಹಕಾರಗಳಿಗೆ ಧನ್ಯವಾದಗಳನ್ನು ಅರ್ಪಿಸಿ ಸಭೆಯನ್ನು ಮುಕ್ತಾಯಗೊಳಿಸಿದರು.

| | |
|---|---|
| ಸಹಿ/- | ಸಹಿ/- |
| **ಕುಲಸಚಿವರು** | **ಕುಲಪತಿಗಳು** |